ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

12

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ

ದಿನಾಂಕ : DATE : 27/6/2022

156.70 ಅಡಿ 2837.38 ಅಡಿ

# ಮೇಲುಕೋಟೆಗೆ ಮಧ್ಯಪ್ರದೇಶ ಸಿಎಂ ಭೇಟಿ, ಬೆಳ್ಳಿ ರಥದ ಸಂ...

ಮಂಡ್ಯ/ಮೇಲುಕೋಟೆ: ಮಧ್ಯಪ್ರದೇಶ ಮುಖ್ಯಮಂತ್ರಿ ಶಿವರಾಜ್ ಸಿಂಗ್ ಚೌಹಾಣ್ ಅವರು ಶುಕ್ರವಾರ ಕುಟುಂಬ ಸಮೇತರಾಗಿ ಶ್ರೀಕ್ಷೇತ್ರ ಚೆಲುವನಾರಾಯಣನ ಸನ್ನಿಧಿಗೆ ಆಗಮಿಸಿ ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಮತ್ತೊಮ್ಮೆ ಮುಖ್ಯಮಂತ್ರಿಯಾದರೆ ಕ್ಷೇತ್ರಕ್ಕೆ ಬಂದು ಪೂಜೆ ಸಲ್ಲಿಸುತ್ತೇನೆ ಎಂದು ಹರಕೆ ಹೊತ್ತುಕೊಂಡಿದ್ದ ಚೌಹಾಣ್ ಅದರಂತೆ ಮುಖ್ಯಮಂತ್ರಿಯಾದ ಬಳಿಕ ಚೆಲುವನಾರಾಯಣ ಸ್ವಾಮಿ ದರ್ಶನ ಪಡೆದರು. ಇದೇ ವೇಳೆ, ಚೆಲುವನಾರಾಯಣಸ್ವಾಮಿಗೆ ಬೆಳ್ಳಿಯ ರಥ ನಿರ್ಮಿಸಿಕೊಡುವ ಸಂಕಲ್ಪವನ್ನೂ ಮಾಡಿದರು. 'ದೇವರ ದರ್ಶನ ಭಾಗ್ಯವೇ ನನ್ನ ಹರಕೆಯಾಗಿತ್ತು. ಅದು ಪೂರ್ಣಗೊಂಡಿದೆ' ಎಂದು ಅರ್ಚಕರ ಎದುರು ಚೌಹಾಣ್ ಹೇಳಿದರು. ತೋಟಗಾರಿಕಾ ಸಚಿವ ಕೆ.ಸಿ.ನಾರಾಯಣಗೌಡ, ಜಿಲ್ಲಾಧಿಕಾರಿ ಡಾ.ಎಂ.ವಿ.ವೆಂಕಟೇಶ್ ಮತ್ತಿತರರು ಈ ವೇಳೆ ಮುಖ್ಯಮಂತ್ರಿಯನ್ನು ಸ್ವಾಗತಿಸಿದರು.



ಮೇಲುಕೋಟೆ ಶ್ರೀ ಚೆಲುವನಾರಾಯಣಸ್ವಾಮಿ ದರ್ಶನ ಪಡೆದ ಮಧ್ಯಪ್ರದೇಶ ಸಿಎಂ ಶಿವರಾಜ್ ಸಿಂಗ್.